**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂ: ಡಿಸಿಇ/ಟಿಆರ್‌ಎನ್/24/2023-ಟಿಡಿಜಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು. ದಿನಾಂಕ:07.07.2023.

# ಸುತ್ತೋಲೆ

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡುವ ಬೋಧಕರ ಪರಿಷ್ಕೃತ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮ ಸಂಖ್ಯೆಯ ದಿನಾಂಕ:06.07.2023 ರ ಸುತ್ತೋಲೆ.

** ** **

ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಿಸುವ ಸಲುವಾಗಿ ರೂಪಿಸಲಾದ ವರ್ಗಾವಣೆ ನಿಯಮಗಳ ನಿಯಮ 5ರಲ್ಲಿ ತಿಳಿಸಿರುವಂತೆ ನಿಗದಿತ ಸೇವಾವಧಿಯನ್ನು ಪೂರೈಸಿ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9 ರ ಮಿತಿಗೊಳಪಟ್ಟು EMIS ತಂತ್ರಾಂಶದಲ್ಲಿ ದಾಖಲಿತ ಮಾಹಿತಿಯನ್ವಯ ಸಿದ್ಧಪಡಿಸಲಾದ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗೆ ಒಳಪಡಲಿರುವ ಬೋಧಕರ (ಪ್ರಾಧ್ಯಾಪಕರು, ಸಹ/ ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ಪಟ್ಟಿಯನ್ನು ಉಲ್ಲೇಖ (4)ರಂತೆ ಪ್ರಕಟಿಸಲಾಗಿತ್ತು.

***ಮುಂದುವರೆಯುತ್ತಾ, ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಮಗಳು-2021 ರ ನಿಯಮ 3 ರ ಪರಂತುವಿನಲ್ಲಿ ಕಲ್ಪಿಸಿರುವ ಅವಕಾಶಗಳಂತೆ 2021ರ ವರ್ಗಾವಣೆ ನಿಯಮಗಳನ್ವಯ ಜೂನ್- 2021, ಏಪ್ರಿಲ್-2022 ಮತ್ತು ಡಿಸೆಂಬರ್-2022 ರ ಮಾಹೆಗಳಲ್ಲಿ ಹುದ್ದೆ ಸಹಿತ ಸ್ಥಳಾಂತರಗೊಂಡಿರುವ ಬೋಧಕರು ಸ್ಥಳಾಂತರ ಪೂರ್ವದಲ್ಲಿ ಕರ್ತವ್ಯನಿರ್ವಹಿಸಿದ್ದ ಕಾಲೇಜು ಮತ್ತು ವಲಯದಲ್ಲಿ ಸಲ್ಲಿಸಿದ್ದ ಸೇವೆಯನ್ನು ಪರಿಗಣಿಸಿ ಪರಿಷ್ಕರಿಸಲಾದ ಪಟ್ಟಿಯನ್ನು ಸಿದ್ಧಪಡಿಸಿ ಈ ಸುತ್ತೋಲೆಗೆ ಅನುಬಂಧಿಸಲಾಗಿದೆ.***

ಸದರಿ ಪರಿಷ್ಕೃತ ಪಟ್ಟಿಯಲ್ಲಿ ವ್ಯತ್ಯಾಸಗಳಿದ್ದಲ್ಲಿ ಪೂರಕ ದಾಖಲೆಗಳೊಂದಿಗೆ ಮನವಿಯನ್ನು **dce.teachingtransfers2023@gmail.com** ವಿಳಾಸಕ್ಕೆ ದಿ:12-07-2023 ರ ಒಳಗಾಗಿ ಇಮೇಲ್ ಮೂಲಕ ಸಲ್ಲಿಸುವಂತೆ ಸೂಚಿಸಿದೆ. ಭೌತಿಕವಾಗಿ ಸಲ್ಲಿಸುವ ಮತ್ತು ಕೊನೆಯ ದಿನಾಂಕದ ನಂತರ ಸಲ್ಲಿಸುವ ಹಾಗೂ ಅಪೂರ್ಣ ಮಾಹಿತಿಯನ್ನು ಪರಿಗಣಿಸಲಾಗುವುದಿಲ್ಲ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ**

**ಪ್ರತಿಯನ್ನು:**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಬೋಧಕರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಹಾಗೂ ಕಲಬುರಗಿ-ಮಾಹಿತಿಗಾಗಿ.
3. ಮಾಹಿತಿ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ರಕ್ಷಾ ಕಡತ 5.ಕಛೇರಿ ಪ್ರತಿ.